ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 20ನೇ ಡಿಸೆಂಬರ್, 2018

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಂ.ಪಿ. ರೇಣುಕಾಚಾರ್ಯ; ಶ್ರೀ ಗೋವಿಂದ ಎಂ. ಕಾರಜೋಳ, ಶ್ರೀ ಸಿದ್ದು ಕೆ. ಸವದಿ, ಶ್ರೀ ಅಭಯ ಪಾಟೀಲ್, ಶ್ರೀ ನರಸಿಂಹ ನಾಯಕ (ರಾಜುಗೌಡ) ಮತ್ತು ಶ್ರೀ ದೊಡ್ಡನಗೌಡ ಜಿ. ಪಾಟೀಲ್; ಶ್ರೀ ಗೂಳಿಹಟ್ಟಿ.ಡಿ.ಶೇಖರ್ ಮತ್ತು ಶ್ರೀಮತಿ ಕೆ.ಪೂರ್ಣಿಮ; ಶ್ರೀ ಲಾಲಾಜಿ ಆರ್ ಮೆಂಡನ್; ಶ್ರೀ ಕೆ.ರಘುಪತಿ ಭಟ್, ಶ್ರೀ ಡಿ.ವೇದವ್ಯಾಸ ಕಾಮತ್ ಮತ್ತು ಡಾ: ವೈ.ಭರತ್ ಶೆಟ್ಟಿ; ಶ್ರೀ ಬಸವರಾಜ ದಢೇಸುಗೂರ್; ಶ್ರೀಮತಿ ರೂಪಾಲಿ ಸಂತೋಷ್ ನಾಯಕ್; ಶ್ರೀ ಉಮಾನಾಥ ಎ. ಕೋಟ್ಯಾನ್; ಶ್ರೀ ಜಗದೀಶ್ ಶೆಟ್ಟರ್, ಶ್ರೀ ವಿ. ಸುನೀಲ್ ಕುಮಾರ್, ಶ್ರೀ ಎಸ್. ಅಂಗಾರ, ಶ್ರೀ ದಿನಕರ ಕೇಶವ ಶೆಟ್ಟಿ, ಶ್ರೀ ಸುನಿಲ್ ಬಿಳಿಯ ನಾಯಕ್, ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ, ಶ್ರೀ ಜಿ. ಕರುಣಾಕರ ರೆಡ್ಡಿ, ಶ್ರೀ ಹರೀಶ್ ಪೂಂಜ ಹಾಗೂ ಇತರರು – ಹೊನ್ನಾಳಿ ತಾಲ್ಲೂಕಿನ ವಿವಿಧ ಮರಳು ಕ್ವಾರಿಗಳಲ್ಲಿ ದರ ವ್ಯತ್ಯಾಸದಿಂದ ಸಾರ್ವಜನಿಕರಿಗೆ ಮರಳಿನ ತೊಂದರೆ ಆಗುತ್ತಿರುವುದು; ರಾಜ್ಯಾದ್ಯಂತ ವ್ಯಾಪಿಸಿರುವ ಮರಳು ಮಾಫಿಯಾದಿಂದ ಮನೆ ನಿರ್ಮಾಣಕ್ಕೆ ಮರಳು ಸಿಗದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು; ಚಿತ್ರದುರ್ಗ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು ಹಾಗೂ ಕಲ್ಲು ಗಣಿ ಗುತ್ತಿಗೆಗಳನ್ನು ತಡೆಯುವುದು ಮತ್ತು ಸ್ಥಳೀಯವಾಗಿ ಪಟ್ಟಾ ಜಮೀನು, ಹಳ್ಳ-ಕುಂಟೆಗಳಲ್ಲಿ ಲಭ್ಯವಾಗುವ ಮರಳನ್ನು ಮರು ಮಾರಾಟ ಮಾಡಲು ಅವಕಾಶ ನೀಡದೇ ಸರ್ಕಾರಿ ಕಾಮಗಾರಿಗಳಿಗೆ ಬಳಸಲು ಅನುಮತಿ ನೀಡುವುದು; ಕರಾವಳಿ ಜಿಲ್ಲೆಗಳಲ್ಲಿ ನದಿ ನೀರಿನಿಂದ ತೆಗೆಯುವ ಮರಳುಗಾರಿಕೆಗೆ ಉಂಟಾಗಿರುವ ಕಾನೂನು ತೊಡಕಿನಿಂದ ಸಾವಿರಾರು ಕೂಲಿ ಕಾರ್ಮಿಕರು ನಿರುದ್ಯೋಗಿಗಳಾಗಿರುವುದು; ಉಡುಪಿ ಜಿಲ್ಲೆಯಲ್ಲಿ ಸಿ.ಆರ್.ಜೆಡ್. ವ್ಯಾಪ್ತಿಯಲ್ಲಿ ಮರಳು ದಿಬ್ಬ ತೆರವುಗೊಳಿಸುವುದು ಹಾಗೂ ಆಶ್ರಯ ಯೋಜನೆಯ ಫಲಾನುಭವಿಗಳು ಮರಳಿನ ತೊಂದರೆಯಿಂದ ನಿಗದಿತ ದಿನಾಂಕದೊಳಗೆ ಮನೆಗಳನ್ನು ನಿರ್ಮಿಸಲು ಸಾಧ್ಯವಾಗದೇ ಇರುವುದು; ಕಾರವಾರ ಮತಕ್ಷೇತ್ರದಲ್ಲಿ ಮರಳಿನ ಅಭಾವ ಉಂಟಾಗಿರುವುದು ಮತ್ತು ನದಿಮೂಲದ ಮರಳಿಗೆ ಪರ್ಯಾಯವಾದ ಕಲಬೆರಕೆ ಎಂ.ಸ್ಯಾಂಡ್ ಸರಬರಾಜು ಆಗುತ್ತಿರುವುದು; ರಾಜ್ಯದಲ್ಲಿ ಮರಳು ಗಣಿಗಾರಿಕೆ ಕುರಿತಾದ ಸಮಸ್ಯೆಗಳಿಂದಾಗಿ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದು ಮತ್ತು ಕೂಲಿ ಕಾರ್ಮಿಕರು ಬವಣೆ ಪಡುತ್ತಿರುವುದು; ಕರಾವಳಿ ಪ್ರದೇಶಗಳಲ್ಲಿ ಕರಾವಳಿ ನಿಯಂತ್ರಣ ವಲಯ ಹಾಗೂ ಕರಾವಳಿ ನಿಯಂತ್ರಣ ವಲಯ ವಲ್ಲದ ಪ್ರದೇಶಗಳಲ್ಲಿ ಮರಳು ತೆಗೆಯಲು ಕಾನೂನಿನಲ್ಲಿ ಅವಕಾಶವಿದ್ದರೂ ಅಧಿಕಾರಿಗಳು ಕಾನೂನನ್ನು ಮರೆಮಾಚಿ ಅನಾವಶ್ಯಕವಾಗಿ ಮರಳು ತೆಗೆಯಲು ತೊಂದರೆಯುಂಟು ಮಾಡುತ್ತಿರುವುದು; ಮುಂತಾದ ವಿಚಾರಗಳ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 2/ ..

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್. ಹಾಲಪ್ಪ, ಎಂ.ಪಿ. ಕುಮಾರಸ್ವಾಮಿ, ಕೆ. ರಘುಪತಿ ಭಟ್, ವಿ. ಸುನೀಲ್ ಕುಮಾರ್, ಡಿ. ವೇದವ್ಯಾಸ ಕಾಮತ್, ಎಸ್. ಅಂಗಾರ, ಲಾಲಾಜಿ ಆರ್. ಮೆಂಡನ್, ಎಂ.ಪಿ. ಅಪ್ಪಚ್ಚು ರಂಜನ್, ಅರಗ ಜ್ಞಾನೇಂದ್ರ ಮತ್ತು ಇತರರು** – ಪಶ್ಚಿಮ ಘಟ್ಟದ ಮಲೆನಾಡಿನ ಕೆಲವು ತಾಲ್ಲೂಕುಗಳಲ್ಲಿ ಮನೆ ನಿರ್ಮಾಣ / ದುರಸ್ಥಿ, ರಸ್ತೆಗಳ ನಿರ್ಮಾಣ, ಕುಡಿಯವ ನೀರು ಪೂರೈಕೆಗೆ ಪೈಪ್‌ಲೈನ್ ಅಳವಡಿಕೆ ಮುಂತಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅರಣ್ಯ ಕಾಯ್ದೆಯಿಂದ ಅಡ್ಡಿ ಉಂಟಾಗುತ್ತಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಗೋವಿಂದ.ಎಂ.ಕಾರಜೋಳ, ಜಗದೀಶ್ ಶೆಟ್ಟರ್, ಕೆ.ಎಸ್. ಈಶ್ವರಪ್ಪ, ಸಿದ್ದು ಸವದಿ, ಬಸವರಾಜ ಬೊಮ್ಮಾಯಿ ಎ.ಎಸ್. ಪಾಟೀಲ್ ನಡಹಳ್ಳಿ ಹಾಗೂ ಮತ್ತಿತರರು** – ಪ್ರಾದೇಶಿಕ ತಾರತಮ್ಯದಿಂದ ಉತ್ತರ ಕರ್ನಾಟಕದ ಅಭಿವೃದ್ಧಿಗೆ ತೀವ್ರ ಹಿನ್ನಡೆ ಆಗುತ್ತಿದೆ ಹಾಗೂ ಈ ಭಾಗದ ನೀರಾವರಿ ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷ ತೋರಲಾಗುತ್ತಿದೆ ಎಂಬ ಭಾವನೆ ಜನರಲ್ಲಿ ಮೂಡಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ.

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು:–

ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ **2018ನೇ ಸಾಲಿನ ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು (ತಿದ್ದುಪಡಿ) ವಿಧೇಯಕವನ್ನು** ಸಭೆಯ ಮುಂದಿಡುವುದು.

5. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಕೃಷ್ಣಬೈರೇಗೌಡ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಅವರು:-**

   ಅ) 2018ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

   ಅ) 2018ನೇ ಸಾಲಿನ ಕರ್ನಾಟಕ ಸಿವಿಲ್ ಸೇವೆಗಳ (ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

   ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಬಂಡೆಪ್ಪ ಖಾಶೆಂಪೂರ (ಮಾನ್ಯ ಸಹಕಾರ ಸಚಿವರು) ಅವರು:-**

   ಅ) 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಸಮಾಜ ಕಲ್ಯಾಣ ಸಚಿವರು) ಅವರು:-**

   ಅ) 2018ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 4/ ..

5. **ಶ್ರೀ ಕೃಷ್ಣಬೈರೇಗೌಡ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಅವರು:-**

ಅ) 2018ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

III. ವಿಧೇಯಕವನ್ನು ಪುನರ್ ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಶ್ರೀ ಜಿ.ಟಿ. ದೇವೇಗೌಡ (ಮಾನ್ಯ ಉನ್ನತ ಶಿಕ್ಷಣ ಸಚಿವರು) ಅವರು:-**

ಅ) ಕರ್ನಾಟಕ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2018ನೇ ಸಾಲಿನ ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು (ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಗೋವಿಂದ.ಎಂ.ಕಾರಜೋಳ, ಎಂ.ಪಿ.ರೇಣುಕಾಚಾರ್ಯ ಮತ್ತು ಕಳಕಪ್ಪ ಗುರುಶಾಂತಪ್ಪ ಬಂಡಿ ಇವರುಗಳು** – ಬಾಗಲಕೋಟೆ ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ ತಾಲ್ಲೂಕುಗಳಲ್ಲಿನ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಸಂಬಂಧ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಕೆ.ಎಸ್.ಈಶ್ವರಪ್ಪ, ಶ್ರೀ ವಿ.ಸುನೀಲ್ ಕುಮಾರ್ ಹಾಗೂ ಹೆಚ್.ಹಾಲಪ್ಪ ಇವರುಗಳು** – ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾಡಿರುವ ವರದಿಯನ್ನು ಸರ್ಕಾರವು ಬಿಡುಗಡೆ ಮಾಡದಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಆಚಾರ್ ಹಾಲಪ್ಪ ಬಸಪ್ಪ, ಅಮರೇಗೌಡ ಬಯ್ಯಾಪುರ, ಪರಣ್ಣ ಈಶ್ವರಪ್ಪ ಮುನವಳ್ಳಿ, ಕೆ. ರಾಘವೇಂದ್ರ ಬಸವರಾಜ ಹಿಟ್ನಾಳ್, ಬಸವರಾಜ ದಢೇಸುಗೂರ್ ಹಾಗೂ ಮತ್ತಿತರರು** – ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಕೊಪ್ಪಳ ಏತ ನೀರಾವರಿ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ನರಸಿಂಹ ನಾಯಕ (ರಾಜುಗೌಡ), ಎಸ್.ವಿ. ರಾಮಚಂದ್ರ ಮತ್ತು ಸಿದ್ದು ಕೆ. ಸವದಿ ಇವರುಗಳು** – ರಾಜ್ಯದಲ್ಲಿ ಪರಿಶಿಷ್ಟ ಪಂಗಡದವರಿಗೆ ಉನ್ನತ ಶಿಕ್ಷಣ ಮತ್ತು ಸಾರ್ವಜನಿಕ ಉದ್ಯೋಗಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇಕಡ 3ರ ಮೀಸಲಾತಿಯನ್ನು ಶೇಕಡ 7ಕ್ಕೆ ಹೆಚ್ಚಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5) **ಶ್ರೀಯುತರುಗಳಾದ ಕೆ.ಜಿ. ಬೋಪಯ್ಯ ಮತ್ತು ಎಂ.ಪಿ. ಅಪ್ಪಚ್ಚು (ರಂಜನ್) ಇವರುಗಳು** – ಜೂನ್ ಮತ್ತು ಆಗಸ್ಟ್ ತಿಂಗಳಿನಲ್ಲಿ ಉಂಟಾದ ಅತಿವೃಷ್ಟಿಯಿಂದ ಹಾನಿಗೊಳಗಾಗಿರುವ ಕೊಡಗು ಜಿಲ್ಲೆಯ ಪುನರ್ ನಿರ್ಮಾಣಕ್ಕೆ ವಿಶೇಷ ಪ್ಯಾಕೇಜ್ ಘೋಷಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6) **ಶ್ರೀಯುತರುಗಳಾದ ಎಂ.ಪಿ.ಕುಮಾರಸ್ವಾಮಿ, ಪಿ.ರಾಜೀವ್, ಎಸ್.ರಘು, ಎಸ್.ವಿ.ರಾಮಚಂದ್ರ, ಎಂ.ಚಂದ್ರಪ್ಪ, ನೆಹರು ಓಲೇಕಾರ್, ಬಸವರಾಜ್ ಮತ್ತಿಮೂಡ್, ಬಿ.ಹರ್ಷವರ್ಧನ, ಹೆಚ್.ನಾಗೇಶ್ ಹಾಗೂ ಮತ್ತಿತರರು** – ಬಡ್ತಿ ಹಾಗೂ ಜೇಷ್ಠತೆ ಸಂರಕ್ಷಣೆ ಕಾಯ್ದೆ 2017ರ ಅನುಷ್ಠಾನಕ್ಕೆ ಇರುವ ಸಮಸ್ಯೆಗಳ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ವಿಶೇಷ ಚರ್ಚೆ

1) **ಶ್ರೀ ಎ.ಟಿ.ರಾಮಸ್ವಾಮಿ** ರವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಬಿ.ಎಂ.ಕಾವಲು ಗ್ರಾಮದ ಸರ್ವೆ ನಂ.137ರಲ್ಲಿರುವ 310 ಎಕರೆ 18 ಗುಂಟೆ ಸರ್ಕಾರಿ ಜಾಗವನ್ನು ಅಕ್ರಮವಾಗಿ ಶ್ರೀ ಹರಿ ಖೋಡೆ ಕುಟುಂಬಕ್ಕೆ ಪರಭಾರೆಯಾಗುತ್ತಿರುವ ಕುರಿತು ದಿನಾಂಕ: 13.12.2018 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಚಾರದ ಬಗ್ಗೆ ವಿಶೇಷ ಚರ್ಚೆ.

2) **ಶ್ರೀ ಎಸ್.ಎ.ರಾಮದಾಸ್, ಎಸ್.ಸುರೇಶ್ ಕುಮಾರ್ ಮತ್ತು** ಸಿ.ಟಿ.ರವಿ ರವರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಪ್ರವೇಶಾತಿ ಪಡೆದು ಪರೀಕ್ಷೆ ತೆಗೆದುಕೊಂಡರೂ ಅಂಕ ಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ ನೀಡದೇ ಇರುವ ವಿಚಾರದ ಬಗ್ಗೆ ವಿಶೇಷ ಚರ್ಚೆ.

3) **ಶ್ರೀ ಸಿ.ಟಿ. ರವಿ, ಶ್ರೀ ಎಸ್. ಸುರೇಶ್ ಕುಮಾರ್, ಶ್ರೀ ಕೆ.ಜಿ. ಬೋಪಯ್ಯ, ಶ್ರೀ ಜೆ.ಸಿ. ಮಾಧುಸ್ವಾಮಿ, ಮತ್ತು ಶ್ರೀ ಅರಗ ಜ್ಞಾನೇಂದ್ರ ಇವರುಗಳು** ಆಂಬಿಡೆಂಟ್ ಪ್ರಕರಣದಲ್ಲಿ ವಂಚನೆಗೊಳಗಾದವರಿಗೆ ನ್ಯಾಯ ಒದಗಿಸುವುದು ಹಾಗೂ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವ ಬಗ್ಗೆ ವಿಶೇಷ ಚರ್ಚೆ.

... 6/ ..

8. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ. ರಘುಪತಿ ಭಟ್ ಅವರು** – ಉಡುಪಿ ನಗರ ಸಭೆಯ ಚುನಾಯಿತ ನಗರ ಸಭಾ ಸದಸ್ಯರ ಸಭೆಯನ್ನು ಹಾಗೂ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲು ಜಿಲ್ಲಾಧಿಕಾರಿಯವರು ಅವಕಾಶ ನೀಡದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

2) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಮಾಸ್ತಿ ಗ್ರಾಮದಲ್ಲಿ ಡಾ. ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ರವರ ಸ್ಮಾರಕ ಮತ್ತು ಅಧ್ಯಯನ ಪೀಠ ಸ್ಥಾಪನೆ ಕುರಿತಂತೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

3) **ಡಾ. ಶಾಮನೂರು ಶಿವಶಂಕರಪ್ಪ ಅವರು** – ದಾವಣಗೆರೆ ಮತ್ತು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಅನುಕೂಲವಾಗುವಂತೆ ಐ.ಆರ್.ಬಿ. ಅಥವಾ ಕೆ.ಎಸ್.ಆರ್.ಪಿ. 13ನೇ ಬೆಟಾಲಿಯನ್ ಅನ್ನು ತುರ್ತಾಗಿ ಸೃಜನೆ ಮಾಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ವಿ.ಸುನೀಲ್ ಕುಮಾರ್ ಅವರು** – ಕಾರ್ಕಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಸಿ.ಆರ್.ಎಫ್. ಯೋಜನೆಯಡಿ ಕಾಮಗಾರಿಗಳನ್ನು ಗುತ್ತಿಗೆ ಪಡೆದ ಸಂಸ್ಥೆಯವರು ಕೆಲವು ಕಾಮಗಾರಿಗಳನ್ನು ಅರ್ಧಕ್ಕೆ ನಿಲ್ಲಿಸಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಕೆ.ಜಿ.ಬೋಪಯ್ಯ ಅವರು** – ಕೊಡಗು ಜಿಲ್ಲೆಯಲ್ಲಿ ಭೂ ಪರಿವರ್ತನೆಯನ್ನು ನಿಲ್ಲಿಸಿರುವುದರಿಂದ ಅಲ್ಲಿನ ನಗರ ಮತ್ತು ಗ್ರಾಮಾಂತರ ಪ್ರದೇಶದ ಜನರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಎಲ್.ನಾಗೇಂದ್ರ ಅವರು** – ಮೈಸೂರು ನಗರದಲ್ಲಿರುವ ಕೃಷ್ಣರಾಜ ಆಸ್ಪತ್ರೆಗೆ ಬರುವ ರೋಗಿಗಳು ಹೆಚ್ಚಾಗಿದ್ದರೂ ವಾರ್ಡ್‌ಗಳು / ಬೆಡ್‌ಗಳ ಕೊರತೆ ಕಂಡುಬರುತ್ತಿರುವುದರಿಂದ ಆ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರು** – ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಪಟ್ಟಣವನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ವಿಚಾರದ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

... 7/ ..

8) **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ಶ್ರೀ ಪಿ.ರಾಜೀವ್ ಇವರುಗಳು** – ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಪ್ರತ್ಯೇಕ ನೇಮಕಾತಿಯಿಂದಾಗಿ ರಿಜರ್ವ್ ಮತ್ತು ಸಿವಿಲ್ ಎಂಬ ತಾರತಮ್ಯ ಹೆಚ್ಚಾಗುತ್ತಿರುವುದರಿಂದ ರಿಜರ್ವ್ ವಿಭಾಗದ ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ ಅಂತರಿಕ ವರ್ಗಾವಣೆಗೆ ಅವಕಾಶ ಮಾಡಿಕೊಡುವ ಮೂಲಕ ರಿಜರ್ವ್ ಮತ್ತು ಸಿವಿಲ್ ಎಂಬ ತಾರತಮ್ಯವನ್ನು ಹೋಗಲಾಡಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

9) **ಶ್ರೀ ಎ.ಎಸ್.ಜಯರಾಮ್ ಅವರು** – ತುರುವೇಕೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಬೆಂಗಳೂರು ವಿದ್ಯುತ್ ಕಂಪನಿ (ಬೆಸ್ಕಾಂ) ವತಿಯಿಂದ ಹೊಸದಾಗಿ ಪರಿವರ್ತಕಗಳ ರಿಪೇರಿ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

10) **ಶ್ರೀ ಸಿದ್ದು.ಕೆ.ಸವದಿ ಅವರು** – ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಡಿಯಲ್ಲಿ ನೇಯ್ಗೆ ಮಾಡುವ ನೇಕಾರರುಗಳಿಗೆ ನೂಲಿನ ಸರಬರಾಜು ಇಲ್ಲದೇ ಇರುವುದು, ನೇಕಾರರಿಗೆ ಪ್ರೋತ್ಸಾಹಧನ ನೀಡುವುದನ್ನು ನಿಲ್ಲಿಸಿರುವುದು ಹಾಗೂ ನೇಕಾರರ ಸಾಲ ಮನ್ನಾ ಮಾಡುವುದು ಮುಂತಾದ ವಿಚಾರಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

11) **ಶ್ರೀ ಕೆ.ಮಾಡಾಳು ವಿರೂಪಾಕ್ಷಪ್ಪ ಮತ್ತು ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರುಗಳು** – ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲ್ಲೂಕಿನ ಕಸಬಾ ಹೋಬಳಿ ಮತ್ತು ಉಬ್ರಾಣಿ ಹೋಬಳಿಯಲ್ಲಿ ಹಾಗೂ ಹಾಸನ ಜಿಲ್ಲೆ, ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳಲ್ಲಿ ಕಾಡಾನೆಗಳ ಹಾವಳಿಯಿಂದ ರೈತರು ತೊಂದರೆಗೊಳಗಾಗಿರುವ ಬಗ್ಗೆ ಮತ್ತು ಕಾಡಾನೆಗಳ ಹಾವಳಿಯನ್ನು ತಡೆಗಟ್ಟಲು ಕೈಗೊಂಡ ಕ್ರಮಗಳು ಹಾಗೂ ಬೆಳೆ ಪರಿಹಾರ ಹೆಚ್ಚಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ್ ಅವರು** – 1998 ಮತ್ತು 1999ರಲ್ಲಿ ಗ್ರಾಮೀಣ ಕೃಪಾಂಕದಡಿಯಲ್ಲಿ ನೇಮಕಾತಿ ಹೊಂದಿ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ವಜಾಗೊಂಡು ನಂತರ ವಿಶೇಷ ನೇಮಕಾತಿಯಡಿಯಲ್ಲಿ ಪುನರ್‌ನೇಮಕಗೊಂಡು ಬೆಳಗಾವಿ ಜಿಲ್ಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರುಗಳಿಗೆ ಸೇವಾ ಸವಲತ್ತುಗಳನ್ನು ನೀಡುವಲ್ಲಿ ತಾರತಮ್ಯ ಉಂಟಾಗಿರುವ ಕುರಿತಂತೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

13) **ಶ್ರೀ ಎಸ್.ಎ. ರಾಮದಾಸ್ ಅವರು** – ಕೆ.ಆರ್.ಎಸ್. ಉದ್ಯಾನವನವನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಿರುವುದರಿಂದ ಜಮೀನನ್ನು ಕಳೆದುಕೊಳ್ಳುವ ರೈತರು ಆಕ್ರೋಶಗೊಂಡಿರುವುದಲ್ಲದೇ ಕೆ.ಆರ್.ಎಸ್. ಅಣೆಕಟ್ಟಿಗೂ ಅಪಾಯ ಉಂಟಾಗುವ ಸಂಭವವಿರುವ ವಿಚಾರದ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

14) **ಡಾ: ಯತೀಂದ್ರ ಸಿದ್ಧರಾಮಯ್ಯ ಅವರು** – ರಾಜ್ಯದಲ್ಲಿ ಮುಜರಾಯಿ ಮತ್ತು ಮುಜರಾಯೇತರ ದೇವಸ್ಥಾನಗಳ ನಿರ್ಮಾಣ ಮತ್ತು ದುರಸ್ತಿಗೆ ಸರ್ಕಾರವು ನೀಡುತ್ತಿರುವ ಹಣ ಸಾಲದೇ ಇರುವುದರಿಂದ ಅದನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

15) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಅಂಕೋಲ-ಹುಬ್ಬಳ್ಳಿ ರೈಲು ಮಾರ್ಗದ ನಿರ್ಮಾಣಕ್ಕೆ ಅರಣ್ಯ ಪ್ರದೇಶದ ನಾಶವನ್ನು ತಪ್ಪಿಸಲು ಕುದುರೆಮುಖ ಗಣಿ ಪ್ರದೇಶವನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಪ್ರಸ್ತಾಪಿಸಿರುವುದರಿಂದ, ಕಳಸಾ ಮತ್ತು ಇತರೆ ಕ್ಷೇತ್ರಗಳ ನಿರಾಶ್ರಿತ ರೈತರು ಮತ್ತು ನಿವಾಸಿಗಳಿಗೆ ಆಶ್ರಯವನ್ನು ಕಲ್ಪಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

16) **ಶ್ರೀ ಬಿ. ಹರ್ಷವರ್ಧನ್ ಅವರು** – ನಂಜನಗೂಡು ತಾಲ್ಲೂಕಿನಲ್ಲಿ ಮಕ್ಕಳಿಗೆ, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ವಿತರಿಸಲಾಗುತ್ತಿರುವ ಆಹಾರದಲ್ಲಿ ಅವ್ಯವಹಾರ ನಡೆಯುತ್ತಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ, ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

17) **ಶ್ರೀಮತಿ ಕೆ. ಪೂರ್ಣಿಮಾ ಅವರು** – ಖಾನಾಪುರ ತಾಲ್ಲೂಕಿನಲ್ಲಿ ಹೆಚ್ಚಾಗಿ ವಾಸಿಸುತ್ತಿರುವ ಹಣಬರ / ಯಾದವ ಸಮುದಾಯದ ಜನರ ಶಾಲಾ ದಾಖಲಾತಿಗಳಲ್ಲಿ ಹಣಬರ ಎಂದು ನಮೂದಿಸುವ ಬದಲಾಗಿ ಮರಾಠ ಎಂದು ನಮೂದಿಸುತ್ತಿರುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

18) **ಶ್ರೀ ಎಂ.ವಿ. ವೀರಭದ್ರಯ್ಯ ಅವರು** – ಮಧುಗಿರಿ ಉಪ ವಿಭಾಗದ ARTO ಕಛೇರಿ ವ್ಯಾಪ್ತಿಗೆ ಬರುತ್ತಿದ್ದ ಶಿರಾ ತಾಲ್ಲೂಕನ್ನು ತುಮಕೂರು ARTO ಕಛೇರಿ ವ್ಯಾಪ್ತಿಗೆ ಸೇರಿಸಿರುವುದನ್ನು ರದ್ದುಪಡಿಸಿ ಮಧುಗಿರಿ ಉಪ ವಿಭಾಗದ ARTO ಕಛೇರಿ ವ್ಯಾಪ್ತಿಗೆ ವಾಪಸ್ಸು ಮಾಡುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

19) **ಶ್ರೀಮತಿ ವಿನಿಷಾ ನೀರೋ ಅವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಛೇರಿಗಳಲ್ಲಿ ಶುಚಿತ್ವ ಇಲ್ಲದೇ ಇರುವುದು ಮತ್ತು ಅಲ್ಲಿನ ಶೌಚಾಲಯಗಳು ಅನಾರೋಗ್ಯಕರ ಸ್ಥಿತಿಯಲ್ಲಿರುವುದರ ಹಾಗೂ ವಿಕಲಚೇತನರು ಶೌಚಾಲಯಗಳನ್ನು ಬಳಸಲು ಅನುಕೂಲವಾಗುವಂತೆ ಅಗತ್ಯ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

20) **ಶ್ರೀ ಜಿ.ಕರುಣಾಕರ ರೆಡ್ಡಿ ಅವರು** – ದಾವಣಗೆರೆ ಸಾಮಾಜಿಕ ಅರಣ್ಯ ವಿಭಾಗದ ಹರಪನಹಳ್ಳಿ ವಲಯದಲ್ಲಿ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಾಗ ಸರ್ಕಾರಿ ಹಣ ದುರುಪಯೋಗ ಆಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

... 9/ ..

21) **ಶ್ರೀ ಆನಂದ್ ಸಿಂಗ್ ಅವರು** – ಹೊಸಪೇಟೆ ತಾಲ್ಲೂಕಿನಲ್ಲಿ ತುಂಗಭದ್ರಾ ನದಿಗೆ ಅಣೆಕಟ್ಟು ಕಟ್ಟುವ ಸಲುವಾಗಿ ವಶಪಡಿಸಿಕೊಂಡಿರುವ ಜಮೀನು ಅಣೆಕಟ್ಟು ನಿರ್ಮಾಣಕ್ಕೆ ಬಳಕೆಯಾಗದೇ ಉಳಿದಿದ್ದು ಅದನ್ನು ಸರ್ಕಾರದ ವಶಕ್ಕೆ ಪಡೆದು ಆಶ್ರಯ ವಸತಿ ಯೋಜನೆಯ ಉದ್ದೇಶಕ್ಕೆ ಬಳಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

22) **ಶ್ರೀ ರವಿಸುಬ್ರಮಣ್ಯ ಅವರು** – ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಹಣ ದುರ್ಬಳಕೆಯಾಗಿ ಖಾಸಗಿ ವ್ಯಕ್ತಿಗಳ ಖಾತೆಗಳಿಗೆ ಜಮಾವಣೆಯಾಗಿದ್ದು, ಇದರ ತನಿಖೆಯನ್ನು ಸಿ.ಬಿ.ಐ. ಗೆ ವಹಿಸುವಂತೆ ಇಂಡಿಯನ್ ಓವರ್ಸೀಸ್ ಬ್ಯಾಂಕ್ ಕೋರಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

23) **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯ ಬಾಣೆ ಜಾಗದಲ್ಲಿ ಕಾಫಿ ಕೃಷಿ ಮಾಡಿರುವುದು ಮತ್ತು ಕಂದಾಯಕ್ಕೆ ಒಳಪಡಿಸಿರುವುದು ಕಾನೂನು ಬಾಹಿರವೆಂದು ಕಂದಾಯ ಇಲಾಖೆಗೆ ಸಂಬಂಧಿಸಿದ ಆಡಿಟ್‌ನಲ್ಲಿ ಅಭಿಪ್ರಾಯ ವ್ಯಕ್ತವಾಗಿರುವುದರಿಂದ ಅಲ್ಲಿನ ಜನರಲ್ಲಿ ಗೊಂದಲವುಂಟಾಗಿರುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

24) **ಶ್ರೀ ಹರೀಶ್ ಪೂಂಜ ಅವರು** – ರಾಜ್ಯದಲ್ಲಿ ರಬ್ಬರ್ ಬೆಳೆಗೆ ನಿಗದಿಪಡಿಸಿರುವ ಬೆಲೆಯಲ್ಲಿ ಗಣನೀಯವಾಗಿ ಇಳಿಕೆಯಾಗಿರುವುದರಿಂದ ರಬ್ಬರ್ ಬೆಳೆಗಾರರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

25) **ಶ್ರೀ ಎಸ್.ಎ. ರವೀಂದ್ರನಾಥ್ ಅವರು** – ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಬಿಜಾಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಸಂಯೋಜನೆಗೊಳಿಸಲು ತೀರ್ಮಾನಿಸಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

26) **ಶ್ರೀ ಬಳ್ಳಾರಿ ವಿರೂಪಾಕ್ಷಪ್ಪ ರುದ್ರಪ್ಪ ಅವರು** – ರಾಜ್ಯದ ರೈತರು ಪಿಕಾರ್ಡ್ ಬ್ಯಾಂಕ್‌ಗಳ ಮೂಲಕ ಪಡೆದಿರುವ ದೀರ್ಘಾವಧಿ ಹಾಗೂ ಮಧ್ಯಮಾವಧಿ ಸಾಲದ ಕಂತುಗಳನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

27) **ಶ್ರೀ ಶ್ರೀಮಂತ್ ಬಾಳಾಸಾಹೇಬ್ ಪಾಟೀಲ್ ಅವರು** – ಅಥಣಿ ತಾಲ್ಲೂಕು ಕಾಗವಾಡ ಮತಕ್ಷೇತ್ರ ವ್ಯಾಪ್ತಿಯಲ್ಲಿನ ಸುಮಾರು 20,000 ಎಕ್ಟೇರ್ ಕೃಷಿ ಜಮೀನನ್ನು ಸವಳು-ಜವಳುಗಳಿಂದ ಮುಕ್ತಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

28) **ಶ್ರೀ ಡಿ. ವೇದವ್ಯಾಸ ಕಾಮತ್ ಮತ್ತು ಡಾ. ಭರತ್ ಶೆಟ್ಟಿ ವೈ. ಇವರುಗಳು** – ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

... 10/ ..

29) **ಶ್ರೀ ಪ್ರತಾಪಗೌಡ ಪಾಟೀಲ್ ಅವರು** – ರಾಷ್ಟ್ರೀಯ ಹೆದ್ದಾರಿ 150–ಎ ನಲ್ಲಿನ ಹತ್ತಿಗೂಡು ಕ್ರಾಸ್‌ನಿಂದ ಬಳ್ಳಾರಿವರೆಗಿನ ಸುಮಾರು 150 ಕಿ.ಮೀ. ಉದ್ದದ ರಸ್ತೆಯು ಕೇವಲ 7 ಮೀಟರ್ ವಿಸ್ತೀರ್ಣವಿರುವ ಕಾರಣ ಆ ಭಾಗದಲ್ಲಿ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿರುವುದರಿಂದ ಅದನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

30) **ಶ್ರೀ ಡಿ. ವೇದವ್ಯಾಸ ಕಾಮತ್, ಡಾ. ಭರತ್ ಶೆಟ್ಟಿ ವೈ., ಹರೀಶ್ ಪೂಂಜ, ಸಂಜೀವ್ ಮಠಂದೂರ್, ರಾಜೇಶ್ ನಾಯ್ಕ್ ಯು., ಉಮಾನಾಥ ಎ. ಕೋಟ್ಯಾನ್, ಇವರುಗಳು** – ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಸರ್ಕಾರಿ ಆಸ್ಪತ್ರೆಗೆ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡುವುದು ಹಾಗೂ ಮಂಗಳೂರು ಜಿಲ್ಲಾ ಸರ್ಕಾರಿ ಲೇಡಿಗೊಷನ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

31) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಹಾಗೂ ಉಡುಪಿ ಜಿಲ್ಲೆಯ ಪ್ರವೇಶ ದ್ವಾರದ ಹೆಜಮಾಡಿ ಪ್ರದೇಶದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ಯೋಜನೆಯಡಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಮೀನುಗಾರಿಕಾ ಬಂದರನ್ನು ಆದಷ್ಟು ಜರೂರು ಪ್ರಾರಂಭ ಮಾಡಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಗಮನ ಸೆಳೆಯುವುದು.

32) **ಶ್ರೀ ಬಸವರಾಜ ಬಿ. ಮತ್ತಿಮೂಡ ಅವರು** – ಕಲ್ಬುರ್ಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಶಹಾಬಾದ್‌ನಲ್ಲಿರುವ ಜಿ.ಇ. ಪವರ್ ಇಂಡಿಯಾ ಲಿಮಿಟೆಡ್ ಕಾರ್ಖಾನೆಯನ್ನು ಮುಚ್ಚುವ ಮೂಲಕ ಅಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಒತ್ತಾಯಪೂರ್ವಕವಾಗಿ ನಿವೃತ್ತಿ ನೀಡುತ್ತಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

33) **ಶ್ರೀ ಉಮೇಶ ವಿ. ಕತ್ತಿ ಅವರು** – ಸಕ್ಕರೆ ಕಾರ್ಖಾನೆಗಳಲ್ಲಿ ಉತ್ಪಾದಿಸುವ ವಿದ್ಯುತ್‌ನ್ನು ಸರ್ಕಾರವು ಮೇ–2018 ರಿಂದ ಕಡಿಮೆ ದರದಲ್ಲಿ ಖರೀದಿಸುತ್ತಿರುವುದರಿಂದ ಕಾರ್ಖಾನೆಗಳು ಹಾಗೂ ರೈತರು ಆರ್ಥಿಕ ತೊಂದರೆ ಅನುಭವಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

9. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಬೋಪಯ್ಯ ಕೆ.ಜಿ.** ಇವರು **"ಸಾಲ ಮನ್ನಾ ಯೋಜನೆ"** ಕುರಿತು **ದಿನಾಂಕ: 12.12.2018** ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 35(1354)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಈ. ತುಕಾರಾಂ ಇವರು** – ಚಿತ್ರದುರ್ಗ, ಬಳ್ಳಾರಿ ಮತ್ತು ತುಮಕೂರು ಜಿಲ್ಲೆಗಳಲ್ಲಿ 2011ರಿಂದ 2018ರವರೆಗೆ ಕ್ರೋಢೀಕರಿಸಿರುವ ಒಟ್ಟು ಎಸ್.ಪಿ.ವಿ. (ಕೆ.ಎಂ.ಎ.ಆರ್.ಸಿ.) ಮೊತ್ತದ ವಿವರಗಳ ಬಗ್ಗೆ ಹಾಗೂ ಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಸಮಿತಿಯ ವತಿಯಿಂದ ಗಣಿ ಬಾಧಿತ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 11/ ..

3) **ಶ್ರೀ ಎ.ಎಸ್. ಜಯರಾಮ್ (ಮಸಾಲಾ ಜಯರಾಮ್) ಇವರು** – ತುರುವೇಕೆರೆ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಹೊಸ ವಿದೇಶಿ ಕಳೆ (ಆಂಬ್ರೋಸಿಯ ಪ್ಸಿಲೋಸ್ಟೇಕಿಯ) ಹರಡಿರುವುದರಿಂದ ಅಲ್ಲಿನ ಕೃಷಿ / ತೋಟಗಾರಿಕೆ ಬೆಳೆಗಳು ನಾಶವಾಗುತ್ತಿದ್ದು ರೈತರು ಆರ್ಥಿಕ ಸಂಕಷ್ಟಕ್ಕೊಳಗಾಗಿರುವ ವಿಷಯಕ್ಕೆ ಸಂಬಂಧಪಟ್ಟಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4) **ಶ್ರೀ ಎಸ್.ಎ.ರಾಮದಾಸ್** ಇವರು **"ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮದ ಅನುಷ್ಠಾನ"** ಕುರಿತು **ದಿನಾಂಕ: 13.12.2018** ರಂದು ಸದನದಲ್ಲಿ ಉತ್ತರಿಸುವ 4ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 60(941)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5) **ಶ್ರೀಮತಿ ಅನಿತಾ ಕುಮಾರಸ್ವಾಮಿ, ಶ್ರೀ ಎ. ಮಂಜುನಾಥ್, ಡಾ: ಹೆಚ್.ಡಿ. ರಂಗನಾಥ್ ಮತ್ತು ಶ್ರೀ ಸಿ.ಎನ್. ಬಾಲಕೃಷ್ಣ, ಇವರುಗಳು** ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ರೇಷ್ಮೆ ಮತ್ತು ಮಾವು ಬೆಳೆಗೆ ಸೂಕ್ತ ಬೆಲೆ ಸಿಗದೇ ರೈತರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

6) **ಶ್ರೀ ಗೋವಿಂದ ಎಂ. ಕಾರಜೋಳ, ಶ್ರೀ ಆನಂದ @ ಚಂದ್ರಶೇಖರ ಮಾಮನಿ ಹಾಗೂ ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಇವರುಗಳು** – ವಿಜಯಪುರ ಜಿಲ್ಲೆಯ ಇಂಡಿ, ನಾಗಠಾಣ ಮತ್ತು ಬಬಲೇಶ್ವರ ಮತಕ್ಷೇತದ ನೀರಾವರಿ ವಂಚಿತ 61 ಹಳ್ಳಿಗಳು ಶಾಶ್ವತ ಬರಗಾಲಕ್ಕೆ ತುತ್ತಾಗಿರುವುದರಿಂದ ಮುಳವಾಡ ಏತ ನೀರಾವರಿ 3ನೇ ಹಂತದಲ್ಲಿ ಲಭ್ಯವಿರುವ ನೀರನ್ನು ಬಳಸಿಕೊಂಡು ಶ್ರೀ ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7) **ಶ್ರೀ ಪ್ರತಾಪಗೌಡ ಪಾಟೀಲ್, ಶ್ರೀ ರಾಜಾ ವೆಂಕಟಪ್ಪ ನಾಯಕ, ಶ್ರೀ ಬಸವನಗೌಡ ದದ್ದಲ್ ಹಾಗೂ ಡಾ. ಎಸ್. ಶಿವರಾಜ್ ಪಾಟೀಲ್ ಇವರುಗಳು** – ತುಂಗಭದ್ರಾ ಜಲಾಶಯದ ಜ್ವಲಂತ ಸಮಸ್ಯೆಗಳು ಹಾಗೂ ಜಲಾಶಯದಲ್ಲಿನ ನೀರನ್ನು ಕಾಲುವೆಗಳಿಗೆ ನೀರು ಸರಬರಾಜು ಮಾಡುವುದರಲ್ಲಿನ ನಿರ್ಲಕ್ಷ್ಯದಿಂದಾಗಿ ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಎರಡನೇ ಬೇಸಿಗೆ ಬೆಳೆಗೆ ನೀರಿನ ಕೊರತೆ ಉಂಟಾಗುತ್ತಿರುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

8) **ಶ್ರೀ ಗೂಳಿಹಟ್ಟಿ.ಡಿ.ಶೇಖರ್, ಶ್ರೀ ಎಂ. ಚಂದ್ರಪ್ಪ, ಶ್ರೀ ಜಿ.ಹೆಚ್. ತಿಪ್ಪಾರೆಡ್ಡಿ ಮತ್ತು ಶ್ರೀಮತಿ ಕೆ. ಪೂರ್ಣಿಮಾ ಇವರುಗಳು** – ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ, ಹೊಸದುರ್ಗ, ಹೊಳಲ್ಕೆರೆ, ಹಿರಿಯೂರು ಮತ್ತಿತರ ತಾಲ್ಲೂಕುಗಳು ತೀವ್ರ ಬರಗಾಲದಿಂದ ತತ್ತರಿಸಿದ್ದು ಅಪ್ಪರ್‌ಭದ್ರ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

9) **ಶ್ರೀ ಅಭಯ ಪಾಟೀಲ್ ಇವರು** – ಬೆಳಗಾವಿ ನಗರದಲ್ಲಿ ಮಹಾನಗರ ಪಾಲಿಕೆಯು ಅಸ್ತಿತ್ವಕ್ಕೆ ಬಂದು ಹಲವು ವರ್ಷಗಳು ಕಳೆದಿದ್ದರೂ ನಗರವು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಬೆಳಗಾವಿ ನಗರದ ಸಮಗ್ರ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 12/ ..

10) **ಶ್ರೀ ಬಸನಗೌಡ ದದ್ದಲ ಇವರು** – ರಾಯಚೂರು ಗ್ರಾಮೀಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ದದ್ದಲ, ಕಟಕನೂರು, ಬೈಲ ಮರ್ಚಡ್ ಮತ್ತು ಕಾತರಿಕಿ ಏತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

11) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್** ಇವರು **"ಆಲಮಟ್ಟಿ ಜಲಾಶಯದ ಮಟ್ಟವನ್ನು ಎತ್ತರಿಸುವುದು"** ಎಂಬ ವಿಷಯದ ಕುರಿತು **ದಿನಾಂಕ: 13.12.2018** ರಂದು ಸದನದಲ್ಲಿ ಉತ್ತರಿಸುವ 4ನೇ ಪಟ್ಟಿಯಲ್ಲಿನ **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:51(984)ಕ್ಕೆ** ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

10. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ಶ್ರೀ ಅಭಯ್ ಪಾಟೀಲ್ ಅವರು ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:

1) " ಬೆಳಗಾವಿ ಹಾಗೂ ಉತ್ತರ ಕರ್ನಾಟಕದ ಪರಿಸರದಲ್ಲಿ ಹಲವಾರು ಶೈಕ್ಷಣಿಕ ವಿದ್ಯಾ ಸಂಸ್ಥೆಗಳು ಇದ್ದು, ಇಲ್ಲಿ ಹೆಚ್ಚು ವಿದ್ಯಾವಂತ ಯುವಕರು ನಿರುದ್ಯೋಗಿಗಳಾಗಿದ್ದು, ಉದ್ಯೋಗವನ್ನು ಅರಸಿ ಇತರ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದನ್ನು ತಪ್ಪಿಸಲು ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಬೆಳಗಾವಿಯಲ್ಲಿ ಒಂದು ಬೃಹತ್ ಪ್ರಮಾಣದ ಐಟಿ ಪಾರ್ಕ್‌ನ್ನು ಸ್ಥಾಪಿಸುವುದು ಅವಶ್ಯಕವಾಗಿದ್ದು, ರಾಷ್ಟ್ರೀಯ ಹೆದ್ದಾರಿ ಸಂಖ್ಯೆ:4 ಕ್ಕೆ ಹೊಂದಿಕೊಂಡಿರುವ ಬೆಳಗಾವಿ ಗ್ರಾಮದ ಸರ್ವೇ ನಂ.1304 ರಿಂದ 1349 ರವರೆಗೆ ಇರುವ ಸುಮಾರು 744 ಎಕರೆ 34 ಗುಂಟೆಯಷ್ಟು ಜಮೀನು ರಾಜ್ಯ ಸರ್ಕಾರಕ್ಕೆ ಸೇರಿದ್ದು, ಈ ಸ್ಥಳದಲ್ಲಿ ಬೃಹತ್ ಪ್ರಮಾಣದ ಐಟಿ ಪಾರ್ಕ್‌ನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಈ ಸದನವು ಒತ್ತಾಯಿಸುತ್ತದೆ."

2) "ನಮ್ಮ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿರುವ ಗಣ್ಯ ವ್ಯಕ್ತಿಗಳ ಹಾಗೂ ಅವರ ಐತಿಹಾಸಿಕ ಸ್ಮಾರಕಗಳನ್ನು ನಿರ್ಮಿಸುವ ಮುಖಾಂತರ ಇಂದಿನ ಯುವ ಪೀಳಿಗೆಗೆ ಅದನ್ನು ಪರಿಚಯಿಸುವುದು ಹಾಗೂ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿಕೊಳ್ಳುವುದು ಈ ಸಂದರ್ಭದಲ್ಲಿ ಅತ್ಯಂತ ಅವಶ್ಯಕವಾಗಿರುತ್ತದೆ. ಆದ್ದರಿಂದ ಈ ವೀರಯೋಧರುಗಳ ಜೀವನ ಚರಿತ್ರೆಗಳನ್ನು ಮಾದರಿ ರೂಪದಲ್ಲಿ ಸ್ಥಾಪಿಸುವ, ವಿಜ್ಞಾನಿಗಳ ಮತ್ತು ಸ್ವತಂತ್ರ ಭಾರತಕ್ಕೆ ಹೋರಾಡಿದ ಮಹಾನ್ ವ್ಯಕ್ತಿಗಳ ಜನ್ಮಸ್ಥಳ, ಕರ್ಮಭೂಮಿ, ಜೀವನ ಚರಿತ್ರೆ ಹಾಗೂ ಸ್ಮಾರಕಗಳ ಪ್ರತಿರೂಪತೆಯ ಪಳೆಯುಳಿಕೆಗಳನ್ನು ಒಂದೇ ಪರಿಸರದಲ್ಲಿ ಸ್ಥಾಪಿಸುವುದರಿಂದ ಇಂದಿನ ಯುವಕರಲ್ಲಿ ದೇಶಾಭಿಮಾನವನ್ನು ಹೆಚ್ಚಿಸುವುದರ ಜೊತೆಗೆ ಉತ್ತರ ಕರ್ನಾಟಕದ ಭಾಗದಲ್ಲಿ ಬೆಳಗಾವಿಯನ್ನು ಮಾದರಿ ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಅವಕಾಶವಾಗುವುದರಿಂದ ಬೆಳಗಾವಿ ತಾಲ್ಲೂಕಿನ ಮಚ್ಚೆ ಗ್ರಾಮದ ಸರ್ವೇ ನಂ.559, 560, 561 ಹಾಗೂ 583ರಲ್ಲಿರುವ ಸುಮಾರು 317 ಎಕರೆ ಸರ್ಕಾರಿ ಜಮೀನಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಂಯುಕ್ತ ಅನುದಾನದಲ್ಲಿ ಐತಿಹಾಸಿಕ ಸ್ಮಾರಕಗಳ ಮಾದರಿಗಳನ್ನು (ರಿಪ್ಲಿಕಾಗಳನ್ನು) ನಿರ್ಮಿಸಬೇಕೆಂದು ಈ ಸದನವು ಒತ್ತಾಯಿಸುತ್ತದೆ."

ಎಸ್. ಮೂರ್ತಿ
ಕಾರ್ಯದರ್ಶಿ
